RNU AIR DHARWAD

APRIL 25, 2024

ALL INDIA RADIO- DHARWAD

PRADESH SAMACHARA (KANNADA) 7:05 AM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ಹರ್ಷವರ್ಧನ ಶೀಲವಂತ

<><><>

ಮುಖ್ಯಾಂಶಗಳು:

<><><>

- 18ನೇ ಲೋಕಸಭೆ ಚುನಾವಣೆ; ರಾಜ್ಯದ ಪ್ರಥಮ ಹಂತದ ಬಹಿರಂಗ ಪ್ರಚಾರ ಅಂತ್ಯ.
- ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ, ನಾಳೆ ಮತದಾನ; ಸಕಲ ಸಿದ್ಧತೆಗಳು ಪೂರ್ಣ.
- ಸ್ವೀಪ್ ಚಟುವಟಿಕೆ; ಕಡ್ಡಾಯ ಮತದಾನದ ಮಹತ್ವ ಕುರಿತು, ಜನ ಜಾಗ್ರತಿ.
- ರಾಜ್ಯದ ಕರಾವಳಿಯಲ್ಲಿ, ಗರಿಷ್ಟ 3 ಡಿಗ್ರಿ ತಾಪಮಾನ ಏರಿಕೆ ಸಾಧ್ಯತೆ.

<><><>

ಈಗ ವಾರ್ತೆಗಳ ವಿವರ

<><><>

18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನೆಲೆ, ರಾಜ್ಯದ ಪ್ರಥಮ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ನಿನ್ನೆ ಸಂಜೆ ತೆರೆ ಬಿದ್ದಿದೆ. ದಕ್ಷಿಣ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಬಿರು ಬಿಸಿಲಿನ ಮಧ್ಯೆಯೇ ಬಿರುಸಿನ ಪ್ರಚಾರದಲ್ಲಿ ತೊಡಗಿದ್ದರು. ಸಾರ್ವಜನಿಕ ಸಭೆ, ಜಾಥಾ, ಮಾರ್ಗ ಪ್ರದರ್ಶನದ ಮೂಲಕ ಮತಯಾಚನೆ ಮಾಡಿದರು.

<><><>

ಕಲಬುರಗಿ ಜಿಲ್ಲೆ, ಅಫ್ಜಲ್‌ಪುರದಲ್ಲಿ, ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ ಪರವಾಗಿ ಎ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಚಾರ ಸಭೆ ನಡೆಸಿದರು.

<><><>

ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ, ರಾಜ್ಯದ ಎಲ್ಲ 28 ಕ್ಷೇತ್ರಗಳಲ್ಲೂ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಗಳು ಜಯ ಸಾಧಿಸುವ ಭರವಸೆ ಇದೆ ಎಂದು, ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ, ಹಾಸನದಲ್ಲಿ ಹೇಳಿದ್ದಾರೆ.

<><><>

ಇಂದು, ಮನೆ ಮನೆಗೆ ಭೇಟಿ ನೀಡಿ ಮತಯಾಚಿಸಲು ಅವಕಾಶವಿದೆ.

<><><>

ಭಾನುವಾರ, 28ನೇ ತಾರೀಖು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಬಾಗಲಕೋಟೆಗೆ ಮಧ್ಯಾಹ್ನ 3 ಗಂಟೆಗೆ ಆಗಮಿಸಿ, ಬಿಜೆಪಿ ಅಭ್ಯರ್ಥಿಗಳ ಪರ ಮತ ಯಾಚಿಸಲಿದ್ದಾರೆ. ವಿಜಯಪುರ ಲೋಕಸಭಾ ಮೀಸಲು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಮೇಶ್ ಜಿಗಜಿಣಗಿ ಮತ್ತು ಬಾಗಲಕೋಟೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ.ಸಿ.ಗದ್ದಿಗೌಡರ ಪರ, ಪ್ರಚಾರಾರ್ಥ ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ.

<><><>

ಕರ್ನಾಟಕದಲ್ಲಿ 14 ಲೋಕಸಭಾ ಕ್ಷೇತ್ರಗಳಲ್ಲಿ ನಾಳೆ, ಮೊದಲನೇ ಹಂತದ ಚುನಾವಣೆಗೆ ಸಕಲ ಸಿದ್ಧತೆ ಪೂರ್ಣಗೊಂಡಿವೆ. ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಮಾಹಿತಿ ಪ್ರಕಾರ, ಮೊದಲ ಹಂತದಲ್ಲಿ ನಾಳೆ ಉಡುಪಿ–ಚಿಕ್ಕಮಗಳೂರು, ದಕ್ಷಿಣಕನ್ನಡ, ಹಾಸನ, ಮೈಸೂರು–ಕೊಡಗು, ಮಂಡ್ಯ, ಚಾಮರಾಜನಗರ, ತುಮಕೂರು, ಬೆಂಗಳೂರು ಕೇಂದ್ರ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ಚಿತ್ರದುರ್ಗ ಈ ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಸಿದ್ಧತೆ ಮಾಡಿಕೊಂಡಿದ್ದು, ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಗಟ್ಟೆಗಳಲ್ಲಿ ವ್ಯಾಪಕ ಭದ್ರತೆ ಕೈಗೊಳ್ಳಲಾಗುತ್ತಿದೆ. ಚುನಾವಣಾ ಸಿಬ್ಬಂದಿಗೆ ಅಗತ್ಯ ತರಬೇತಿ ನೀಡಿದ್ದು, ಇಂದು ಮಸ್ಟರಿಂಗ್ ಕಾರ್ಯ ನಡೆಯಲಿದೆ.

<><><>

ಲೋಕಸಭೆಗೆ ರಾಜ್ಯದಲ್ಲಿ ಎರಡನೇ ಹಂತದ ಚುನಾವಣೆ ಮೇ 7 ರಂದು ನಡೆಯಲಿದ್ದು, ಇಂದು ಮತ್ತು ನಾಳೆ, 14 ಕ್ಷೇತ್ರಗಳಲ್ಲಿ ಹಿರಿಯ ನಾಗರಿಕರು ಮತ್ತು ವಿಶೇಷಚೇತನರು, ಮನೆಯಿಂದ ಮತದಾನ ಮಾಡಲಿದ್ದಾರೆ.

<><><>

ಧಾರವಾಡ ಲೋಕಸಭಾ ಕ್ಷೇತ್ರದಲ್ಲಿ, ಸಾವಿರದ 8 ನೂರಾ 53 ನೋಂದಾಯಿತ ಮತದಾರರು, ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯ ವರೆಗೆ, ಮನೆಯಿಂದ ಮತದಾನ ಮಾಡಲಿದ್ದು, ಮತ ಗೌಪ್ಯತೆ ಕಾಪಾಡುವಂತೆ, ಚುನಾವಣಾಧಿಕಾರಿ ದಿವ್ಯಾ ಪ್ರಭು, ಸೂಚಿಸಿದ್ದಾರೆ.

<><><>

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ನಾಳೆ ಶುಕ್ರವಾರ ಮತದಾನ ನಡೆಯಲಿದ್ದು, ಮುಕ್ತ, ನ್ಯಾಯ ಸಮ್ಮತ, ನಿರ್ಭೀತ ಹಾಗೂ ಶಾಂತಿಯುತ ಚುನಾವಣೆ ನಡೆಸಲು, ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು, ಜಿಲ್ಲಾ ಚುನಾವಣಾಧಿಕಾರಿ ಪಿ.ಎನ್.ರವೀಂದ್ರ ಆಕಾಶವಾಣಿಗೆ ತಿಳಿಸಿದ್ದಾರೆ. 8 ಥೀಮ್ ಬೇಸ್ಡ್ ಮತ್ತು 8 ಪಾರಂಪರಿಕ ಮತಗಟ್ಟೆಗಳು ಗಮನ ಸೆಳೆದು, ಮತದಾನದ ಪ್ರಮಾಣ ಹೆಚ್ಚಿಸಲಿವೆ ಎಂದು, ರವೀಂದ್ರ ಹೇಳಿದ್ದಾರೆ.

<><><>

ಜಿಲ್ಲಾ ಚುನಾವಣಾಧಿಕಾರಿ ಪಿ.ಎನ್. ರವೀಂದ್ರ 45 ಸೆಕೆಂದುಗಳು

<><><>

ನಾಳೆ ಶುಕ್ರವಾರ 26 ರಂದು, ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ, ಮೊದಲ ಹಂತದ ಚುನಾವಣೆ ನಡೆಯಲಿದ್ದು, ಒಟ್ಟು ಅರ್ಹ ಮತದಾರರ ಸಂಖ್ಯೆ 2 ಕೋಟಿ 59 ಲಕ್ಷ 52 ಸಾವಿರ, ಮೀರಿದೆ.

ಕಲಬುರಗಿಯಲ್ಲಿ ಅತೀ ಹೆಚ್ಚು ಮತದಾರರು ನೋಂದಾವಣೆಯಾಗಿದ್ದಾರೆ. ಕಡಿಮೆ ಸಂಖ್ಯೆಯ ಮತದಾರರಿರುವುದು ಉತ್ತರಕನ್ನಡ ಜಿಲ್ಲೆಯಲ್ಲಿ. ಪುರುಷರಿಗಿಂತ ಮಹಿಳಾ ಮತದಾರರ ಸಂಖ್ಯೆ ಹೆಚ್ಚಿರುವುದು ವಿಶೇಷ.

ಒಟ್ಟು 30 ಸಾವಿರದ 602 ಮತಗಟ್ಟೆಗಳ ಪೈಕಿ, 19 ಸಾವಿರದ 701 ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. ಮತಗಟ್ಟೆಯ ಪ್ರತಿಯೊಂದು ಕ್ಷಣದ ವಿಡಿಯೋವನ್ನು ಸಾರ್ವಜನಿಕರು ನೋಡಬಹುದಾಗಿದೆ. ಸಾವಿರದ 370 ಬೂತ್‌ಗಳಲ್ಲಿ ಸಿ.ಸಿ. ಟಿವಿ ಕ್ಯಾಮೆರಾ ಅಳವಡಿಸಲಾಗಿದೆ.

50 ಸಾವಿರ ಪೊಲೀಸ್ ಪಡೆ, 7 ಕಂಪನಿಗಳ ಪ್ಯಾರಾ ಮಿಲಿಟರಿ ಪಡೆ, 65 ಕಂಪನಿ ಕೇಂದ್ರೀಯ ಮೀಸಲು ಪಡೆಗಳನ್ನು, ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾಗಿದೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಮೈಸೂರು ಜಿಲ್ಲೆ ಹೆಗ್ಗಡದೇವಕೋಟೆ ತಾಲೂಕಿನ, ಅಂತರಸಂತೆ ಆಟೋ ನಿಲ್ದಾಣದಲ್ಲಿ, ಸ್ವೀಪ್ ಸಮಿತಿ, ಮತದಾನ ಜಾಗೃತಿ ಕಾರ್ಯಕ್ರಮ ಆಯೋಜಿಸಿತ್ತು.

ಲೋಕಸಭಾ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳು, ದ್ವೇಷ ಭಾವ ಕೆರಳಿಸುವ, ಜಾತಿ-ಧರ್ಮ ಆಧಾರಿತ ಚರ್ಚೆಗೆ ಅವಕಾಶವಿಲ್ಲ; ಹಾಗೂ ಚುನಾವಣಾ ಪ್ರಚಾರ ಕಾರ್ಯದಲ್ಲಿ ಮಕ್ಕಳನ್ನು ತೊಡಗಿಸಿಕೊಳ್ಳುವಂತಿಲ್ಲ ಎಂದು, ಹಾವೇರಿ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕ, ಆದೇಶ ತಿತರ್ಮರೆ ಸ್ಪಷ್ಟ ಪಡಿಸಿದ್ದಾರೆ.

ಲೋಕಸಭೆ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು, ಬಾಗಲಕೋಟೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ, ಶಶಿಧರ ಕುರೇರ, ಜನರ ಬಳಿ ತೆರಳಿ, ಕರ ಪತ್ರ ಹಂಚುವ ಮೂಲಕ, ಮತದಾನ ಜಾಗೃತಿ ಮೂಡಿಸಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ, ಗದಗ ನಗರದ ಆದರ್ಶ ಶಿಕ್ಷಣ ಸಮಿತಿಯ ಮಹಾವಿದ್ಯಾಲಯದಲ್ಲಿ, ಮತದಾನ ಜಾಗೃತಿ ಕಾರ್ಯಕ್ರಮ ಜರುಗಿತು. ಗದಗ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಮಾಣಿಕರಾವ್ ಪಾಟೀಲ ಪಾಲ್ಗೊಂಡಿದ್ದರು.

ಕೋಲಾರ ಜಿಲ್ಲೆ, ಕೆ.ಜಿ.ಎಫ್ ನಗರದ ಸ್ವೀಪ್ ಸಮಿತಿ, ಮತದಾನ ಜಾಗೃತಿ ಸಲುವಾಗಿ ಆಯೋಜಿಸಿದ್ದ, ಜಾಗೃತಿ ಜಾಥಾ ಹಾಗೂ ರಂಗೋಲಿ ಸ್ಪರ್ಧೆಗೆ, ಪೌರಾಯುಕ್ತ ಪವನ್ ಚಾಲನೆ ನೀಡಿದರು.

ಲೋಕಸಭಾ ಚುನಾವಣೆಯಲ್ಲಿ, ಮಹಿಳೆಯರ ಭಾಗವಹಿಸುವಿಕೆಯನ್ನು ಉತ್ತೇಜಿಸಲು, ಮೈಸೂರು ಜಿಲ್ಲಾ ಚುನಾವಣಾ ಸಮಿತಿ, ವಿಶೇಷ ಪಿಂಕ್ ಬೂತ್ ಅಥವಾ ಸಖಿ ಮತಗಟ್ಟೆಗಳನ್ನು ನಿರ್ಮಿಸಲಿದೆ.

ಯಾದಗಿರಿ ಜಿಲ್ಲೆ, ಸುರಪುರ ವಿಧಾನಸಭಾ ಮೀಸಲು ಅಭ್ಯರ್ಥಿ ಕ್ಷೇತ್ರದಲ್ಲಿ, 143 ಜನ ಹಿರಿಯ ನಾಗರಿಕರು, 44 ಜನ ವಿಶೇಷ ಚೇತನ ಮತದಾರರಿದ್ದಾರೆ. ಇಂದು ಬ್ಯಾಲೆಟ್ ಪೇಪರ್ ಮೂಲಕ ಮತದಾನ ಪಡೆಯಲಾಗುತ್ತಿದೆ.

ಕೊಪ್ಪಳ ಜಿಲ್ಲೆಯಲ್ಲಿ, ಮತದಾರ ಜಾಗ್ರತಿಗಾಗಿ ವಿಶೇಷಚೇತನರಿಂದ ಬೈಕ್ ರ್‍ಯಾಲಿ ಜರುಗಿತು.

<><><>

ಚುನಾವಣಾ ಆಯೋಗದ ಮುತುವರ್ಜಿಯಿಂದ, ಈ ಬಾರಿ ಚುನಾವಣೆಯಲ್ಲಿ ಗಣನೀಯ ಸಂಖ್ಯೆಯ ಯುವ ಮತದಾರರು, ಪ್ರಥಮ ಬಾರಿಗೆ ತಮ್ಮ ಮತ ಚಲಾಯಿಸಲಿದ್ದಾರೆ.

ಪ್ರಸಕ್ತ 18ನೇ ಲೋಕಸಭೆ ಚುನಾವಣೆಯಲ್ಲಿ, ಪ್ರಥಮ ಬಾರಿಗೆ ಮತದಾನ ಮಾಡಲಿರುವ, ಧಾರವಾಡದ ಕರ್ನಾಟಕ ಕಾಲೇಜಿನ ಕಲಾ ವಿಭಾಗದ ಪದವಿ ವಿದ್ಯಾರ್ಥಿನಿ, ರಮ್ಯಾ ಚವಟೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ರಮ್ಯಾ ಚವಟೆ 30 ಸೆಕೆಂದುಗಳು

<><><>

ಭಾರತ ಚುನಾವಣಾ ಆಯೋಗದ, ರಾಷ್ಟ್ರ ಮಟ್ಟದ ಆಚಾರ್ಯ ತರಬೇತುದಾರ, ಕಲಬುರಗಿ ಜಿಲ್ಲೆ ಸೇಡಂನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಹಿರಿಯ ಪ್ರಾಧ್ಯಾಪಕ, ಡಾಕ್ಟರ್ ಶಶಿಶೇಖರ ರೆಡ್ಡಿ ಅವರು, ಇಲೆಕ್ಟ್ರಾನಿಕ್ ವೋಟಿಂಗ್ ಮಷೀನ್ – ಇ.ವಿ.ಎಂ.; ವಿದ್ಯುನ್ಮಾನ ಮತಯಂತ್ರದ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಡಾ. ಶಶಿಶೇಖರ ರೆಡ್ಡಿ 48 ಸೆಕೆಂದುಗಳು

<><><>

ಉತ್ತರಕನ್ನಡ ಜಿಲ್ಲೆಯಾದ್ಯಂತ ನಾಡಿದ್ದು, ಶನಿವಾರದ ವರೆಗೆ, ಒಣ ಹವೆಯ ಪ್ರಮಾಣ ಹೆಚ್ಚಳವಾಗಿ, ಬಿಸಿ ಗಾಳಿ ಬೀಸಲಿದೆ ಎಂದು, ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜ್ಯದ ಕರಾವಳಿ ಭಾಗದಲ್ಲಿ ಗರಿಷ್ಠ ತಾಪಮಾನ, 2 ರಿಂದ 3 ಡಿಗ್ರಿ ಸೆಲ್ಸಿಯಸ್ ನಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ಬಿಸಿ ಮತ್ತು ಆರ್ದ್ರತೆಯ ವಾತಾವರಣ ಹೆಚ್ಚಿ, ಸೆಕೆ ಇರಲಿದೆ. ಜನ ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಕೋರಿದ್ದಾರೆ.

<><><>

ಕಲ್ಯಾಣ ಕರ್ನಾಟಕದ ಕಲಬುರಗಿಯಲ್ಲಿ 41 ದಶಾಂಶ 5 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

<><><>

ಹಿರಿಯ ಪತ್ರಕರ್ತ, ರಾಜ್ಯ ಕಾರ್ಯ ನಿರತ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷರಾಗಿದ್ದ ಎನ್. ಅರ್ಜುನ್ ದೇವ, ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ 92 ವರ್ಷ ವಯಸ್ಸಾಗಿತ್ತು. ತಾಯಿನಾಡು, ಸಂಯುಕ್ತ ಕರ್ನಾಟಕ, ಪ್ರಜಾವಾಣಿ ಸೇರಿದಂತೆ, ಸೂರ್ಯೋದಯ ಪತ್ರಿಕೆ ಸಂಪಾದಕರಾಗಿಯೂ, ಅವರು ಸೇವೆ ಸಲ್ಲಿಸಿದ್ದಾರೆ. ಅವರ ಜನ್ಮಸ್ಥಳ ಕೋಲಾರ ಜಿಲ್ಲೆ, ಚೌಡದೇವನಹಳ್ಳಿಯಲ್ಲಿ, ನಿನ್ನೆ ಸಂಜೆ ಪಾರ್ಥಿವ ಶರೀರದ ಅಂತ್ಯಕ್ರಿಯೆ ಜರುಗಿತು. ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಸೇರಿದಂತೆ, ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- 18ನೇ ಲೋಕಸಭೆ ಚುನಾವಣೆ; ರಾಜ್ಯದ ಪ್ರಥಮ ಹಂತದ ಬಹಿರಂಗ ಪ್ರಚಾರ ಅಂತ್ಯ.
- ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ, ನಾಳೆ ಮತದಾನ; ಸಕಲ ಸಿದ್ಧತೆಗಳು ಪೂರ್ಣ.

- ಸ್ವೀಪ್ ಚಟುವಟಿಕೆ; ಕಡ್ಡಾಯ ಮತದಾನದ ಮಹತ್ವ ಕುರಿತು, ಜನ ಜಾಗ್ರತಿ.
- ರಾಜ್ಯದ ಕರಾವಳಿಯಲ್ಲಿ, ಗರಿಷ್ಠ 3 ಡಿಗ್ರಿ ತಾಪಮಾನ ಏರಿಕೆ ಸಾಧ್ಯತೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>

ಹರ್ಷ